# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಧಾರವಾಡ ಜಿಲ್ಲೆಯ, ಧಾರವಾಡ, ಹುಬ್ಬಳ್ಳಿ, ಕುಂದಗೋಳ, ನವಲಗುಂದ ಮತ್ತು ಕಲಘಟಗಿ ತಾಲ್ಲೂಕುಗಳಲ್ಲಿನ ಎಲ್ಲಾ ಜನವಸತಿಗಳಿಗೆ ಕಲಘಟಗಿ ಪಟ್ಟಣ ಮತ್ತು ಬೆಳಗಾವಿ ಜಿಲ್ಲೆಯ ಸವದತ್ತಿ ತಾಲ್ಲೂಕಿನ ಮಾರ್ಗಮಧ್ಯದ 8 ಹೆಚ್ಚುವರಿ ಜನವಸತಿಗಳಿಗೆ (ಯಡ್ರಾವಿ, ಬೆಟಸೂರ್, ಹಿರೇಉಲ್ಲೀಗೇರಿ, ಚಿಕ್ಕ ಉಲ್ಲಿಗೇರಿ, ಇನಾಮಹೊಂಗಲ್, ಸಂಗ್ರೇಶಕೊಪ್ಪ, ಯಡಹಳ್ಳಿ ಮತ್ತು ಕೆಂಚರಮಣಹಲ್) ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯನ್ನು DBOT ಆಧಾರದ ಮೇಲೆ ಅನುಷ್ಠಾನಗೊಳಿಸಲು ಪರಿಷ್ಕೃತ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:-**

1. ಸರ್ಕಾರದ ಆದೇಶ ಸಂಖ್ಯೆ:ಗ್ರಾಕುನೀ&ನೈಇ/173/ಗ್ರಾನೀಸ(4)2021, ದಿನಾಂಕ:03.06.2021.
2. ದಿನಾಂಕ:22.0.2022ರ ಟೆಂಡರ್ ಅಂಗೀಕರಿಸುವ ಪ್ರಾಧಿಕಾರ ಸಭೆಯ ನಡವಳಿಗಳು.
3. ಮುಖ್ಯ ಅಭಿಯಂತರರು, ಗ್ರಾ.ಕು.ನೀ&ನೈ ಇಲಾಖೆರವರ ಕಡತ ಸಂ:ಗ್ರಾಅಪ/1167/ಗ್ರಾಕುನೀ&ನೈಇ/2016-17.

---

**ಪೀಠಿಕೆ:**

ಧಾರವಾಡ ಜಿಲ್ಲೆಯ, ಧಾರವಾಡ, ಹುಬ್ಬಳ್ಳಿ, ಕುಂದಗೋಳ, ನವಲಗುಂದ ಮತ್ತು ಕಲಘಟಗಿ ತಾಲ್ಲೂಕುಗಳಲ್ಲಿನ ಎಲ್ಲಾ ಜನವಸತಿಗಳಿಗೆ ಕಲಘಟಗಿ ಪಟ್ಟಣ ಮತ್ತು ಬೆಳಗಾವಿ ಜಿಲ್ಲೆಯ ಸವದತ್ತಿ ತಾಲ್ಲೂಕಿನ ಮಾರ್ಗಮಧ್ಯದ 8 ಹೆಚ್ಚುವರಿ ಜನವಸತಿಗಳಿಗೆ (ಯಡ್ರಾವಿ, ಬೆಟಸೂರ್, ಹಿರೇಉಲ್ಲೀಗೇರಿ, ಚಿಕ್ಕ ಉಲ್ಲಿಗೇರಿ, ಇನಾಮಹೊಂಗಲ್, ಸಂಗ್ರೇಶಕೊಪ್ಪ, ಯಡಹಳ್ಳಿ ಮತ್ತು ಕೆಂಚರಮಣಹಲ್) ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯನ್ನು DBOT ಆಧಾರದ ಮೇಲೆ ಅನುಷ್ಠಾನಗೊಳಿಸಲು ಮೇಲೆ(1)ರಲ್ಲಿ ಓದಲಾದ ಆದೇಶದಲ್ಲಿ ರೂ.103249.00ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಅದರಂತೆ KTPP ನಿಯಮಾವಳಿಯನ್ವಯ ಟೆಂಡರ್ ಆಹ್ವಾನಿಸಲಾಗಿ ಕನಿಷ್ಠ ದರ ನಮೂದಿಸಿದ ಗುತ್ತಿಗೆದಾರರ ದರಗಳನ್ನು ಪರಿಗಣಿಸಿ ಮೇಲೆ(2)ರಲ್ಲಿ ಓದಲಾದ ಟೆಂಡರ್ ಅಂಗೀಕರಿಸುವ ಪ್ರಾಧಿಕಾರ ಸಭೆಯಲ್ಲಿ ಮಂಡಿಸಲಾಗಿ, ಸಭೆಯ ಅನುಮತಿಯಂತೆ **ರೂ.1042.34ಕೋಟಿಗಳ** ಪರಿಷ್ಕೃತ ಅಂದಾಜು ಮೊತ್ತಕ್ಕೆ ಕಾಮಗಾರಿ ಅನುಷ್ಠಾನಗೊಳಿಸಲು ಮೇಲೆ(3)ರಲ್ಲಿ ಓದಲಾದ ಕಡತದಲ್ಲಿ ಕೋರಿರುತ್ತಾರೆ.

ಸದರಿ ಯೋಜನೆಯಲ್ಲಿ ಪರಿಗಣಿಸಿರುವ OHTಗಳಲ್ಲಿ ಕೆಲವು OHTಗಳನ್ನು JJM ಅಡಿಯಲ್ಲಿ ಕೈಗೆತ್ತಿಕೊಂಡಿರುವ ಕಾಮಗಾರಿಗಳಲ್ಲಿ ನಿರ್ವಹಿಸಲಾಗುತ್ತಿದೆ. ಸದರಿ ಯೋಜನೆಯಲ್ಲಿ ಗುತ್ತಿಗೆದಾರರಿಂದ ವಾಸ್ತವಿಕವಾಗಿ OHTಗಳ ಅನುಷ್ಠಾನದನ್ವಯ ನಮೂದಿಸಿರುವ ದರಗಳಿಗೆ ಪಾವತಿಸುವ ಮೊತ್ತ ಒಳಗೊಂಡಂತೆ ಹೋಲಿಸಿದಾಗ ಯೋಜನೆಯ ಮೊತ್ತವು **ರೂ.1042.34ಕೋಟಿಗಳಿಗೆ** ಪರಿಷ್ಕೃತವಾಗಿರುತ್ತದೆ.

ಚಾಲ್ತಿ ಪಾರದರ್ಶಕ ನೀತಿಯನ್ವಯ ನಿಯಮಾನುಸಾರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, **ಧಾರವಾಡ** ಹಾಗೂ ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ರವರು ಮುಂದಿನ ಪ್ರಕ್ರಿಯೆಯನ್ನು ಅನುಸರಿಸಲು ಅನುವಾಗುವಂತೆ **ಜಲ ಜೀವನ್ ಮಿಷನ್ (JJM)** ಕಾರ್ಯಕ್ರಮದ ಅಡಿಯಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲು ನಿರ್ಧರಿಸಲಾಗಿದೆ. ಆದ್ದರಿಂದ ಈ ಆದೇಶ.

..2

 387

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ಧಾರವಾಡ ಜಿಲ್ಲೆಯ, ಧಾರವಾಡ, ಹುಬ್ಬಳ್ಳಿ, ಕುಂದಗೋಳ, ನವಲಗುಂದ ಮತ್ತು ಕಲಘಟಗಿ ತಾಲ್ಲೂಕುಗಳಲ್ಲಿನ ಎಲ್ಲಾ ಜನವಸತಿಗಳಿಗೆ ಕಲಘಟಗಿ ಪಟ್ಟಣ ಮತ್ತು ಬೆಳಗಾವಿ ಜಿಲ್ಲೆಯ ಸವದತ್ತಿ ತಾಲ್ಲೂಕಿನ ಮಾರ್ಗಮಧ್ಯದ 8 ಹೆಚ್ಚುವರಿ ಜನವಸತಿಗಳಿಗೆ (ಯಡ್ರಾವಿ, ಬೆಟಸೂರ್, ಹಿರೇಉಲ್ಲಿಗೇರಿ, ಚಿಕ್ಕ ಉಲ್ಲಿಗೇರಿ, ಇನಾಮಹೊಂಗಲ್, ಸಂಗ್ರೇಶಕೊಪ್ಪ, ಯಡಹಳ್ಳಿ ಮತ್ತು ಕೆಂಚರಮಣಹಲ್) ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯನ್ನು DBOT ಆಧಾರದ ಮೇಲೆ **ರೂ.1042.34ಕೋಟಿ(ಒಂದು ಸಾವಿರದ ನಲವತ್ತೆರಡು ಕೋಟಿ ಮೂವತ್ತಾಲ್ಕು ಲಕ್ಷ ರೂಪಾಯಿಗಳು ಮಾತ್ರ)ಗಳ ಪರಿಷ್ಕೃತ** ಅಂದಾಜು ಮೊತ್ತದಲ್ಲಿ ಕಾರ್ಯಗತಗೊಳಿಸುವ ಸಂಬಂಧ **ಜಲ ಜೀವನ್ ಮಿಷನ್ (JJM)** ಕಾರ್ಯಕ್ರಮದ ಅಡಿಯಲ್ಲಿ ಪರಿಷ್ಕೃತ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

**2. ಆಡಳಿತಾತ್ಮಕ ಅನುಮೋದನೆ ಮತ್ತು ಅನುದಾನ ವಿನಿಯೋಗವು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟಿರುತ್ತದೆ:**

a) ಅನುಮೋದಿತ ಕುಡಿಯುವ ನೀರಿನ ಯೋಜನೆಯ ವ್ಯಾಪ್ತಿಗೆ ಬರುವ ಗ್ರಾಮ / ಜನವಸತಿಗಳು ಮತ್ತ್ಯಾವುದೇ ಯೋಜನೆಗಳಡಿ ಸೇರ್ಪಡೆಯಾಗಿರಬಾರದು.

b) ಯೋಜನೆಯ **DBOT** ಟೆಂಡರ್‌ನ್ನು KTPP ಪಾರದರ್ಶಕ ನಿಯಮಗಳನ್ನು ಅನುಸರಿಸಿ ಅದರಂತೆ ಕ್ರಮವಹಿಸತಕ್ಕದ್ದು.

c) ಟೆಂಡರ್ ಅವಾರ್ಡ್ ಮಾಡುವ ಮೊದಲು ಅಗತ್ಯವಿರುವ ಅನುದಾನವನ್ನು ಲಭ್ಯತೆ ಮಾಡಿಕೊಂಡು ಕ್ರಿಯಾ ಯೋಜನೆಯಲ್ಲಿ ಅಳವಡಿಸಿದ ನಂತರ ನಿಯಮಾನುಸಾರ ಮುಂದಿನ ಕ್ರಮವಹಿಸುವುದು.

d) ಈ ಯೋಜನೆಯ ಅನುಷ್ಠಾನ ಮತ್ತು ಅನುದಾನ ವಿನಿಯೋಗದಲ್ಲಿ ಅನುಮೋದಿತ ಟೆಂಡರ್ ಮೊತ್ತ ಮೀರಿ ಹೆಚ್ಚಳವಾಗದಂತೆ ಅನುಷ್ಠಾನ ಅಧಿಕಾರಿಗಳು ನಿಗಾವಹಿಸಿ ಪ್ರಚಲಿತ ನಿಯಮಗಳನುಸಾರ ಅಗತ್ಯವಿರುವ ನಿಬಂಧನೆಗಳನ್ನು ಅಳವಡಿಸಿಕೊಂಡು ಸೂಕ್ತ ರೀತಿಯಲ್ಲಿ ಒಡಂಬಡಿಕೆ – ಕರಾರುಗಳನ್ನು ಮಾಡಿಕೊಳ್ಳತಕ್ಕದ್ದು.

e) ಯಶಸ್ವಿ ಗುತ್ತಿಗೆದಾರರು ಕಾಮಗಾರಿಯನ್ನು ಉತ್ತಮ ಗುಣಮಟ್ಟದಲ್ಲಿ ಪೂರ್ಣಗೊಳಿಸಿ ಕಾರ್ಯಗತಗೊಳಿಸಬೇಕು. ತದನಂತರ 5 ವರ್ಷಗಳ ಕಾಲ ಸದರಿ ಯೋಜನೆಯ ಸಂಪೂರ್ಣ ನಿರ್ವಹಣೆ ಹಾಗೂ ಕಾರ್ಯಾಚರಣೆ ಜವಾಬ್ದಾರಿಯನ್ನು (ವಿದ್ಯುತ್ ಶುಲ್ಕ ಹೊರತುಪಡಿಸಿ) ಸದರಿ ಸಂಸ್ಥೆ ನಿರ್ವಹಿಸತಕ್ಕದ್ದು.

f) ಯೋಜನಾ ವ್ಯಾಪ್ತಿಯ ಜನವಸತಿಗಳಿಗೆ 55 LPCD ನೀರನ್ನು ಒದಗಿಸುವುದು. ಯಾವುದೇ ಕಾರಣಕ್ಕೂ ಅನುಮೋದಿತ ಯೋಜನಾ ಅಂದಾಜು ವೆಚ್ಚದಲ್ಲಿ ಹೆಚ್ಚಳವಾದಲ್ಲಿ ಗುತ್ತಿಗೆದಾರರೇ ಅಂತಹ ಹೆಚ್ಚಳ ಭರಿಸತಕ್ಕದ್ದು.

g) ಗುತ್ತಿಗೆದಾರರು ಸಿದ್ಧಪಡಿಸುವ ಡಿ.ಪಿ.ಆರ್.ಗೆ **ಮುಖ್ಯ ಅಭಿಯಂತರರು, ಗ್ರಾ.ಕು.ನೀ.&ನೈ.** ಇಲಾಖೆ ಇವರ ಅಧೀನದಲ್ಲಿರುವ **DBOT** ತಾಂತ್ರಿಕ ಸಮಿತಿಯು ತಾಂತ್ರಿಕ ಸಿಂಧುತ್ವವನ್ನು ಪರಿಶೀಲಿಸಿ ದೃಢೀಕರಿಸಬೇಕು. ಹೀಗೆ ದೃಢೀಕರಿಸುವಾಗ ವಾಸ್ತವಿಕವಾಗಿ ಅಗತ್ಯವಿರುವ ಪ್ರಮಾಣದ ಶುದ್ಧ ಕುಡಿಯುವ ನೀರಿನ ಪೂರೈಕೆ ವ್ಯವಸ್ಥೆಗೆ ಎಲ್ಲಾ ತಾಂತ್ರಿಕ ವಿನ್ಯಾಸಗಳು ಮತ್ತು ಕಾಮಗಾರಿಗಳು ಪೂರಕವಾಗಿರುವುದನ್ನು ದೃಢಪಡಿಸಿಕೊಳ್ಳಬೇಕು.

..3

h) ಈ ಯೋಜನೆಯ ಕಾಮಗಾರಿಯನ್ನು 30 ತಿಂಗಳ ಕಾಲಮಿತಿಯೊಳಗೆ ಅನುಷ್ಠಾನಗೊಳಿಸತಕ್ಕದ್ದು. ಯಾವುದೇ ವಿಳಂಬಕ್ಕೆ ಅವಕಾಶವೀಯಕೂಡದು. ಯೋಜನೆಯ ಘಟಕದಲ್ಲಿನ ಸಾಮಗ್ರಿಗಳ ಬೆಲೆ ಹೆಚ್ಚಳಕ್ಕೆ ಅವಕಾಶವಿರುವುದಿಲ್ಲ. ಬಲ್ಕ್‌ವಾಟರ್ ಮೀಟರ್‌ಗಳನ್ನು ಎಲ್ಲಾ ಜನವಸತಿಗಳ OHT ಬಳಿ ಅಳವಡಿಸತಕ್ಕದ್ದು.

i) ಯೋಜನಾ ಅಂದಾಜು ಮೊತ್ತದ ಕನಿಷ್ಠ **10%**ನ್ನು ಯೋಜನೆ ಕಾರ್ಯಗತಗೊಳಿಸಿ ತೃಪ್ತಿಕರ **O&M** ವ್ಯವಸ್ಥೆ ನಿರೂಪಿಸುವ ಕಾರ್ಯಕ್ಷಮತೆ ಆಧರಿಸಿ ನಂತರ ಗುತ್ತಿಗೆದಾರರಿಗೆ ಪಾವತಿಸಬೇಕು.

j) ಈ ಯೋಜನೆಯ ಮುಖ್ಯ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿದ ನಂತರ, ಅವುಗಳ ಗುಣಮಟ್ಟ ಮತ್ತು ಕಾರ್ಯಕ್ಷಮತೆ ಮತ್ತು **PMC** ವರದಿ ಆಧರಿಸಿ ಅನುಮೋದಿತ **ToR** ಹಾಗೂ ಟೆಂಡರ್ ಕರಾರಿನಂತೆ ನಿಯಮಾನುಸಾರ ಬಿಲ್ ಪಾವತಿಸಲು ಅನುಷ್ಠಾನಾಧಿಕಾರಿಗಳು ಹಾಗೂ **ಮುಖ್ಯ ಅಭಿಯಂತರರು, ಗ್ರಾ.ಕು.ನೀ&ನೈ.** ಇಲಾಖೆರವರು ಕ್ರಮವಹಿಸಬೇಕು. ಕಾಮಗಾರಿಯ ಕಾಲಕಾಲಿಕ ಪ್ರಗತಿ ಮತ್ತು ಗುಣಮಟ್ಟ ಪರಿಶೀಲಿಸಿ **ಮುಖ್ಯ ಅಭಿಯಂತರರು, ಗ್ರಾ.ಕು.ನೀ&ನೈ.** ಇಲಾಖೆರವರು ವರದಿ ಮಾಡತಕ್ಕದ್ದು.

k) ಈ ಯೋಜನೆಯ ವಿನ್ಯಾಸದ ಕಾರ್ಯಸಿಂಧುತ್ವ ಪರಿಶೀಲಿಸುವುದು, ಕಾಲಮಿತಿಯೊಳಗೆ ಯೋಜನೆ ಅನುಷ್ಠಾನಗೊಳಿಸುವುದು ಮತ್ತು ಯೋಜನೆಯ ಕಾಮಗಾರಿಗಳ ಗುಣಮಟ್ಟ ಪರಿವೀಕ್ಷಣೆ ಸಲುವಾಗಿ ಅಗತ್ಯವಿರುವ ಯೋಜನಾ ಉಸ್ತುವಾರಿ ಘಟಕವನ್ನು ಟೆಂಡರ್ ಮುಖೇನ ಗೊತ್ತುಪಡಿಸಿ, ಸರ್ಕಾರದ ಅನುಮೋದನೆ ಪಡೆಯಲು **ಮುಖ್ಯ ಅಭಿಯಂತರರು, ಗ್ರಾ.ಕು.ನೀ&ನೈ.** ಇಲಾಖೆರವರು ಜರೂರಾಗಿ ಕ್ರಮವಹಿಸತಕ್ಕದ್ದು.

l) ಮೇಲ್ಕಂಡ ಅನುಮೋದಿತ ಮೊತ್ತ **DBOT** ತಾಂತ್ರಿಕ ಸಮಿತಿ ದೃಢೀಕರಿಸುವ ಯೋಜನೆಯ ಮುಖ್ಯ ಕಾಮಗಾರಿಗಳ ವಾಸ್ತವಿಕ ಅಂದಾಜು ಮೊತ್ತದ ನಿಬಂಧನೆಗೊಳಪಟ್ಟಿರುತ್ತದೆ. ಅಂತೆಯೇ, ಅನುಮೋದಿತ ಸಂಸ್ಥೆಯೊಡನೆ **MoU**/ಕರಾರು ಪತ್ರ ಮಾಡಿಕೊಳ್ಳುವ ಮೊದಲು ಗರಿಷ್ಠ ಮಿತವ್ಯಯ ಅಳವಡಿಸಿ, ಸರ್ಕಾರದ ಅನುಮತಿ ಪಡೆದು ಯೋಜನೆಯ ಅನುಷ್ಠಾನ ಕುರಿತು **ಮುಖ್ಯ ಅಭಿಯಂತರರು, ಗ್ರಾ.ಕು.ನೀ&ನೈ.** ಇಲಾಖೆರವರು ಮುಂದಿನ ಕ್ರಮವಹಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಸರ್ಕಾರದ ಪದನಿಮಿತ್ತ ಉಪ ಕಾರ್ಯದರ್ಶಿ(ಅಭಿವೃದ್ಧಿ),
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ –AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–I – G&SSA- AUDIT) ಕರ್ನಾಟಕ, ಬೆಂಗಳೂರು.
3. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ಧಾರವಾಡ.**
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.

5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾ.ಅ.ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಆಯುಕ್ತರು, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು.
7. ಮುಖ್ಯ ಅಭಿಯಂತರರು, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
8. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
9. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, **ಧಾರವಾಡ.**
10. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&.ನೈ. ವೃತ್ತ ಕಛೇರಿ, **ಬೆಳಗಾವಿ.**
11. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ.ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
12. ಸಂಪಾದಕರು, "ಕರ್ನಾಟಕ ವಿಕಾಸ" ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ ಬೆಂಗಳೂರು.
13. ಮುಖ್ಯ ಲೆಕ್ಕಾಧಿಕಾರಿ, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು.
14. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&.ನೈ. ವಿಭಾಗ, **ಧಾರವಾಡ.**
15. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ.ಮತ್ತು ಪಂ.ರಾಜ್ ಇಲಾಖೆ, (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು) ಬೆಂಗಳೂರು.
16. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ) ಬೆಂಗಳೂರು.
17. ಗ್ರಾ.ಅಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು) ಬೆಂಗಳೂರು.
18. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.